ರಾಜ್ಯದಲ್ಲಿ ರಂಗಮಂದಿರಗಳ ನಿರ್ಮಾಣ

1247 (1703) ಶ್ರೀ ಹೆಚ್. ಎಂ. ಚಂದ್ರಶೇಖರಪ್ಪ (ಶಿವಮೊಗ್ಗ) : ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ರಂಗಮಂದಿರಗಳ ನಿರ್ಮಾಣಕ್ಕೆ ಮಾಡಲಾದ ವೆಚ್ಚ ಎಷ್ಟು?

ಆ) ಶಿವಮೊಗ್ಗ ಜಿಲ್ಲೆಯಲ್ಲಿ ಕಳೆದ 2 ವರ್ಷಗಳಲ್ಲಿ ನಿರ್ಮಿಸಿದ ರಂಗಮಂದಿರಗಳೆಷ್ಟು? ಅವುಗಳಿಗೆ ಮಾಡಲಾದ ಖರ್ಚು ಎಷ್ಟು?

ಶ್ರೀ ಮತಿ ರಾಣಿಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯವರು) :

ಅ) ಜಿಲ್ಲಾರಂಗ ಮಂದಿರಗಳಿಗೆ, ರೂ. 25.00 ಲಕ್ಷ
ಬಯಲು ರಂಗಮಂದಿರಗಳಿಗೆ ರೂ. 20.00 ಲಕ್ಷ

ಆ) ಮಾಡಿರುವ ವೆಚ್ಚ

ಜಿಲ್ಲಾ ರಂಗಮಂದಿರಗಳು : (ಒಂದು) ರೂ. 113.50 ಲಕ್ಷ
ಬಯಲು ರಂಗಮಂದಿರಗಳು : (ಎಂಟು) ರೂ. 4.00 ಲಕ್ಷ
ಈವರೆಗೆ

ಶಿವಮೊಗ್ಗ ಜಿಲ್ಲೆಯಲ್ಲಿ ಕ್ರೀಡಾ ಅಭಿವೃದ್ಧಿ

1248 (1704) ಶ್ರೀ ಹೆಚ್. ಎಂ. ಚಂದ್ರಶೇಖರಪ್ಪ (ಶಿವಮೊಗ್ಗ) : ಮಾನ್ಯ ಯುವಜನ ಸೇವೆ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಶಿವಮೊಗ್ಗ ಜಿಲ್ಲೆಯಲ್ಲಿ ಕ್ರೀಡೆಗಳ ಪ್ರೋತ್ಸಾಹಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಆ) ಯುವಜನರಿಗಾಗಿ ಕ್ರೀಡಾ ಅಭಿವೃದ್ಧಿಗಾಗಿ ಪ್ರಸಕ್ತ ಆಯವ್ಯಯದಲ್ಲಿ ಒದಗಿಸಲಾದ ಹಣ ಎಷ್ಟು?

ಇ) ಸಹ್ಯಾದ್ರಿ ಕಾಲೇಜಿನಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಲು ಸರ್ಕಾರ ತೆಗದುಕೊಂಡ ಕ್ರಮಗಳೇನು?

ಶ್ರೀ ಎಸ್. ಎಸ್. ಮಲ್ಲಿಕಾರ್ಜುನ್ (ಯುವಜನ ಸೇವೆಗಳು ಹಾಗೂ ಕ್ರೀಡಾ ರಾಜ್ಯ ಸಚಿವರು): ಶಿವಮೊಗ್ಗ ಜಿಲ್ಲೆಯಲ್ಲಿ ಕ್ರೀಡೆಗಳಿಗೆ ಪ್ರೋತ್ಸಾಹ ನೀಡಲು ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿದೆ. ಪ್ರಮುಖವಾದ ಕ್ರಮಗಳು ಈ ಕೆಳಕಂಡಂತಿರುತ್ತವೆ.

1) ಶಿವಮೊಗ್ಗ ಜಿಲ್ಲೆಯಲ್ಲಿ ಈ ಕೆಳಕಂಡ ಕ್ರೀಡೆಗಳಲ್ಲಿ ಅಥ್ಲೆಟಿಕ್ಸ್, ಹ್ಯಾಂಡ್ ಬಾಲ್ ಖೋ-ಖೋ, ಕಬ್ಬಡ್ಡಿ, ವೈಟ್‌ಲಿಫ್ಟಿಂಗ್, ಟೇಬಲ್ ಟೆನ್ನೀಸ್, ಹಾಕಿ ಕ್ರೀಡಾ ತರಬೇತಿದಾರರನ್ನು ನೇಮಿಸಲಾಗಿದೆ.